## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019-20ನೇ ಸಾಲಿನ ಪ್ರಧಾನ ಮಂತ್ರಿ ಕಿಸಾನ್ (Pradhan Mantri KIsan SAmman Nidhi PM-Kisan) ಯೋಜನೆಯಡಿ ಆಡಳಿತ ವೆಚ್ಚದ ವಿನಿಯೋಗಕ್ಕೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ**

1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 1-1/2019-Credit, ದಿನಾಂಕ: 01.02.2019
2. ಸರ್ಕಾರದ ಆದೇಶ ಸಂಖ್ಯೆ: ಕೃಇ 09 ಕೃಉಇ 2019, ದಿನಾಂಕ: 15.02.2019
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 3-7/2019FWS, ದಿನಾಂಕ: 03.04.2019
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 17.6.2019 ರಂದು ಜರುಗಿದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ತೀರ್ಮಾನಿಸಿದ ಅನ್ವಯ

**ಪ್ರಸ್ತಾವನೆ:**

2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕಿಸಾನ್ (Pradhan Mantri KIsan SAmman Nidhi PM-Kisan) ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ ಓದಲಾದ (1)ರಲ್ಲಿ ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಕಿಸಾನ್ (Pradhan Mantri KIsan SAmman Nidhi PM-Kisan) ಯೋಜನೆಯನ್ನು ಕೇಂದ್ರ ಸರ್ಕಾರದ ಶೇ.100ರ ಅನುದಾನದೊಂದಿಗೆ ಅನುಷ್ಠಾನಗೊಳಿಸುತ್ತಿದೆ.

ಮೇಲೆ ಓದಲಾದ (2)ರಲ್ಲಿ ಪ್ರಸ್ತಾಪಿತ ಯೋಜನೆಯ ಅನುಷ್ಠಾನ ಮಾರ್ಗಸೂಚಿಗಳನ್ನು ಅಧಿಸೂಚಿಸಿ ರಾಜ್ಯ ಸರ್ಕಾರವು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3)ರಲ್ಲಿ ಕೇಂದ್ರ ಸರ್ಕಾರವು ಸದರಿ ಯೋಜನೆಯಡಿ ಬಿಡುಗಡೆಗೊಳಿಸಲಾಗುವ ಮೊದಲನೇ ಕಂತಿನ ಅನುದಾನದ ಶೇ. 0.25 ರಷ್ಟು ಹಾಗೂ ಮುಂದಿನ ಎರಡು ಕಂತುಗಳಲ್ಲಿ ಬಿಡುಗಡೆಗೊಳಿಸಲಾಗುವ ಅನುದಾನದಲ್ಲಿ ಶೇ.0.125 ರಷ್ಟು ಅನುದಾನವನ್ನು ಆಡಳಿತಾತ್ಮಕ ವೆಚ್ಚಕ್ಕೆ ಭರಿಸಲು ಅನುಮೋದನೆ ನೀಡಲಾಗಿರುತ್ತದೆ.

ಆಡಳಿತಾತ್ಮಕ ವೆಚ್ಚದಲ್ಲಿ ಪ್ರಾಯೋಜನೆ ಉಸ್ತುವಾರಿ ಘಟಕದ ನಿರ್ವಹಣೆ ವೆಚ್ಚ ಸೇರಿದಂತೆ ಲೇಖನ ಸಾಮಗ್ರಿ ಖರೀದಿ, ಕ್ಷೇತ್ರ ಪರಿಶೀಲನೆ, ನಿಗದಿತ ನಮೂನೆಯಲ್ಲಿ ಸಂಗ್ರಹಿಸಲಾಗುವ ಮಾಹಿತಿಯನ್ನು ದೃಢೀಕರಿಸಿ ವೆಬ್ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವ ಕ್ಷೇತ್ರ ಸಿಬ್ಬಂದಿಗೆ ಪ್ರೋತ್ಸಾಹ ಧನ, ಪ್ರಚಾರ ಹಾಗೂ ಇತರೆ ವೆಚ್ಚಕ್ಕಾಗಿ ಉಪಯೋಗಿಸಲು ಅವಕಾಶವಿರುತ್ತದೆ.

ಮೇಲೆ ಓದಲಾದ (4)ರ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಚರ್ಚಿಸಿ, ಕೇಂದ್ರ ಸರ್ಕಾರದಿಂದ ಅರ್ಹ ಫಲಾನುಭವಿಯೆಂದು ಅಂಗೀಕರಿಸಲ್ಪಡುವ ಪ್ರತಿ ಫಲಾನುಭವಿಗೆ ಅನ್ವಯವಾಗುವಂತೆ ಕ್ಷೇತ್ರ ಸಿಬ್ಬಂದಿಗಳಾದ ಸರ್ಕಾರಿ ನೌಕರರಿಗೆ ರೂ. 05.00 (ಐದು ರೂಪಾಯಿಗಳು ಮಾತ್ರ)ಗಳನ್ನು ಮತ್ತು ಸಾಮಾನ್ಯ ಸೇವಾ ಕೇಂದ್ರ (CSC)ದ ಮುಖಾಂತರ ಕಾರ್ಯ ನಿರ್ವಹಿಸುವ ಇತರೆ ವ್ಯಕ್ತಿಗಳಿಗೆ ರೂ. 10.00 (ಹತ್ತು ರೂಪಾಯಿಗಳು ಮಾತ್ರ)ಗಳನ್ನು ಪ್ರೋತ್ಸಾಹಧನವಾಗಿ ನೀಡಲು ಬಳಸಬಹುದಾಗಿದೆ ಹಾಗೂ ಕೇಂದ್ರ ಸರ್ಕಾರದಿಂದ ಅಂಗೀಕರಿಸಲ್ಪಡುವ ಒಟ್ಟಾರೆ ಫಲಾನುಭವಿಗಳ ಸಂಖ್ಯೆಯನ್ನು ಪರಿಗಣನೆಯಲ್ಲಿರಿಸಿ ಪ್ರೋತ್ಸಾಹ ಧನ ನಿರ್ಧರಿಸಬಹುದಾಗಿದೆ ಎಂದು ತೀರ್ಮಾನಿಸಲಾಗಿರುತ್ತದೆ.

.2..

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿದ್ದು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದಆದೇಶ ಸಂಖ್ಯೆ: ಕೃಇ 09 ಕೃಉಇ 2019, ಬೆಂಗಳೂರು, ದಿನಾಂಕ: 21-6-2019**

2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕಿಸಾನ್ (Pradhan Mantri KIsan SAmman Nidhi PM-Kisan) ಯೋಜನೆಯಡಿ ಕೇಂದ್ರ ಸರ್ಕಾರದಿಂದ ಅರ್ಹ ಫಲಾನುಭವಿಯೆಂದು ಅಂಗೀಕರಿಸಲ್ಪಡುವ ಪ್ರತಿ ಫಲಾನುಭವಿಗೆ ಅನ್ವಯವಾಗುವಂತೆ ಕ್ಷೇತ್ರ ಸಿಬ್ಬಂದಿಗಳಾದ, ಸರ್ಕಾರಿ ನೌಕರರಿಗೆ ರೂ. 05.00 (ಐದು ರೂಪಾಯಿಗಳು ಮಾತ್ರ)ಗಳನ್ನು ಮತ್ತು ಸಾಮಾನ್ಯ ಸೇವಾ ಕೇಂದ್ರ (CSC)ದ ಮುಖಾಂತರ ಕಾರ್ಯ ನಿರ್ವಹಿಸುವ ಇತರೆ ವ್ಯಕ್ತಿಗಳಿಗೆ ರೂ. 10.00 (ಹತ್ತು ರೂಪಾಯಿಗಳು ಮಾತ್ರ)ಗಳನ್ನು ಪ್ರೋತ್ಸಾಹ ಧನವಾಗಿ ನೀಡಲು ಆದೇಶಿಸಲಾಗಿದೆ.

ಕೇಂದ್ರ ಸರ್ಕಾರದಿಂದ ಅಂಗೀಕರಿಸಲ್ಪಡುವ ಒಟ್ಟಾರೆ ಫಲಾನುಭವಿಗಳ ಸಂಖ್ಯೆಯನ್ನು ಪರಿಗಣನೆಯಲ್ಲಿರಿಸಿ ಕ್ಷೇತ್ರ ಸಿಬ್ಬಂದಿಯ ಪ್ರೋತ್ಸಾಹ ಧನ ನಿರ್ಧರಿಸಿ, ಪ್ರೋತ್ಸಾಹ ಧನವನ್ನು ನೀಡಲು ಮೊತ್ತವನ್ನು ಕೃಷಿ ಆಯುಕ್ತರು ಆಯಾ ಜಿಲ್ಲೆಗಳಿಗೆ ವರ್ಗಾಯಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

ಕೃಷಿ ಆಯುಕ್ತರು ಕೇಂದ್ರ ಸರ್ಕಾರವು ಆಗ್ಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

BS Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

21/06/19

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ) ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ. ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.

10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
12. ಆಯುಕ್ತರು, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು.
13. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
14. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಆಯುಕ್ತರು, ರೇಷ್ಮೆ ಇಲಾಖೆ, ಬೆಂಗಳೂರು.
16. ಡೆಪ್ಯುಟಿ ಡೈರೆಕ್ಟರ್ ಜನರಲ್ & ಸ್ಟೇಟ್ ಇನ್ಫರ್ಮ್ಯಾಟಿಕ್ಸ್ ಆಫೀಸರ್, ಬೆಂಗಳೂರು
17. ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಸದಸ್ಯರು ಬೆಂಗಳೂರು.
18. ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್, ಬೆಂಗಳೂರು.
19. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
20. ಎಲ್ಲಾ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರು.
21. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
22. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
23. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
24. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ– 4&5), ಆರ್ಥಿಕ ಇಲಾಖೆ, ಬೆಂಗಳೂರು
25. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
26. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕಂಡಿಕೆ 16ರಿಂದ 20ರವರೆಗೆ ಕೃಷಿ ಆಯುಕ್ತರ ಮುಖಾಂತರ ಹೊರಡಿಸುವುದು)